ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

Phone:0824-2220593 Email : dudc_dkd@yahoo.co.in

ಮುನ್(3)/ಇಎಸ್ ಟಿ/ಸಿಆರ್ 45/2021/E-137733 ದಿನಾಂಕ:28-09-2021

# ಅಧಿಸೂಚನೆ

ವಿಷಯ: ಮಂಗಳೂರು ಮಹಾನಗರಪಾಲಿಕೆಯಲ್ಲಿ ಪೌರಕಾರ್ಮಿಕರ ನೇಮಕಾತಿ ವಿಶೇಷ ನಿಯಮಗಳ ರೀತ್ಯಾ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಅಧಿಸೂಚನೆ ಸಂ:ನಅಇ 126 ಟಿಎಂಎಸ್ 2016, ದಿನಾಂಕ: 07.08.2017

2. ಸರ್ಕಾರದ ಆದೇಶ ಸಂಖ್ಯೆ: ನಅಇ 129 ಎಂಎನ್ ಇ 2017 ಬೆಂಗಳೂರು ದಿ:05-12-2017

3. ಪೌರಾಡಳಿತ ನಿರ್ದೇಶನಾಲಯದ ಪತ್ರ ಸಂಖ್ಯೆ:13651/ಡಿಎಂಎ/10/ಎಸ್ ಡಿಎ/2015-16 ದಿನಾಂಕ:11-06-2021

**************

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಮಹಾನಗರಪಾಲಿಕೆಯಲ್ಲಿ ಖಾಲಿ ಇರುವ ಈ ಕೆಳಗೆ ಕೋಷ್ಟಕದಲ್ಲಿ ತಿಳಿಸಿದಂತೆ ಪೌರಕಾರ್ಮಿಕರ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖ(1) ಮತ್ತು (2)ರ ಆದೇಶದಂತೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ದ.ಕ ಜಿಲ್ಲಾಧಿಕಾರಿ ಕಚೇರಿಯ ಜಿಲ್ಲಾ ನಗರಾಭಿವೃದ್ಧಿ ಕೋಶ ವೆಬ್‌ಸೈಟ್ http://dakshinakannadadudc.mrc.gov.in ಅಥವಾ https://dk.nic.in ಹಾಗೂ ಮಂಗಳೂರು ಮಹಾನಗರಪಾಲಿಕೆಯ ವೆಬ್‌ಸೈಟ್ http://mangalurucity.mrc.gov.in ಮೂಲಕ ಸಲ್ಲಿಸಬಹುದಾಗಿದೆ.

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ಕನಿಷ್ಠ ವಿದ್ಯಾರ್ಹತೆ / ಅರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಪೌರ ಕಾರ್ಮಿಕರು | 190 | 1) ವಿದ್ಯಾರ್ಹತೆ ಅನ್ವಯಿಸುವುದಿಲ್ಲ.<br>2) ಕನ್ನಡ ಮಾತನಾಡಲು ಗೊತ್ತಿರಬೇಕು.<br>3) ಪೌರಕಾರ್ಮಿಕ ಹುದ್ದೆಯಲ್ಲಿ ಕೆಲಸ ಮಾಡುತ್ತಿರುವ ಕ್ಷೇಮಾಭಿವೃದ್ಧಿ, ದಿನಗೂಲಿ, ಗುತ್ತಿಗೆ, ಹೊರಗುತ್ತಿಗೆ, ಸಮಾನ ಕೆಲಸಕ್ಕೆ ಸಮಾನ ವೇತನ ನೌಕರರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.<br>4) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು 18 ವರ್ಷ ಪೂರ್ಣಗೊಂಡಿದ್ದು, ಗರಿಷ್ಟ ವಯೋಮಿತಿ 45 ವರ್ಷ. | 17000-28950 |

## 1. ಹುದ್ದೆಯ ವರ್ಗೀಕರಣ :

| ಕ್ರ. ಸ. | ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲರು * | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಇತರೆ ** | ಒಟ್ಟು |
|---|---|---|---|---|---|---|---|---|---|---|
| 1 | ಸಾಮಾನ್ಯ ಅಭ್ಯರ್ಥಿ | 18 | 29 | 24 | 5 | 9 | 5 | 4 | 1 | 95 |
| 2 | ಪರಿಶಿಷ್ಟ ಜಾತಿ | 6 | 9 | 8 | 2 | 2 | 1 | 1 | 0 | 29 |
| 3 | ಪರಿಶಿಷ್ಟ ಪಂಗಡ | 1 | 2 | 2 | 1 | 0 | 0 | 0 | 0 | 6 |
| 4 | ಪ್ರವರ್ಗ-1 | 2 | 3 | 2 | 1 | 0 | 0 | 0 | 0 | 8 |
| 5 | ಪ್ರವರ್ಗ-2ಎ | 6 | 9 | 7 | 2 | 2 | 1 | 1 | 0 | 28 |
| 6 | ಪ್ರವರ್ಗ-2ಬಿ | 2 | 3 | 2 | 1 | 0 | 0 | 0 | 0 | 8 |
| 7 | ಪ್ರವರ್ಗ-3ಎ | 2 | 2 | 2 | 1 | 0 | 0 | 0 | 0 | 7 |
| 8 | ಪ್ರವರ್ಗ-3ಬಿ | 2 | 3 | 3 | 1 | 0 | 0 | 0 | 0 | 9 |
|  | **ಜುಮ್ಲಾ** | **39** | **60** | **50** | **14** | **13** | **7** | **6** | **1** | **190** |

**ಷರಾ** : * ಸರಕಾರದ ಆದೇಶ ಸಂ:ಸಿಅಸು ಇ 128 ಸೆನೆನಿ 2006 ದಿನಾಂಕ:1.8.2009ರಂತೆ 4 ಮತ್ತು 24ನೇ ಬಿಂದುಗಳನ್ನು ದೃಷ್ಟಿ ಮಾಂದ್ಯತೆ ಹೊಂದಿದ ಅಭ್ಯರ್ಥಿಗಳಿಗೆ ಮೀಸಲಿರಿಸಬೇಕಾಗಿರುತ್ತದೆ. ಪ್ರಸ್ತುತ 'ಡಿ' ಗ್ರೂಪ್ (ಪೌರಕಾರ್ಮಿಕ) ನೇಮಕಾತಿಯಲ್ಲಿ ಸಾಮಾನ್ಯ ವರ್ಗದಡಿ ಅಂಗವಿಕಲತೆ ಬಿಂದು 4 ಆಗಿರುತ್ತದೆ. ಆದರೆ ಸರಕಾರದ ಆದೇಶ ಸಂ:ಡಿಪಿಎಆರ್ 54 ಎಸ್ ಆರ್ ಆರ್ 2012 ದಿನಾಂಕ:23.6.2012 ರಂತೆ 'ಡಿ' ಗ್ರೂಪ್ (ಪೌರಕಾರ್ಮಿಕ) ಹುದ್ದೆಗೆ ದೃಷ್ಟಿ ಮಾಂದ್ಯತೆಯನ್ನು ಪರಿಗಣಿಸಲಾಗುವುದಿಲ್ಲ. ಅಲ್ಲದೇ ಈ ಹುದ್ದೆಗಳು ಸ್ವಚ್ಛತಾ ಕಾರ್ಯಗಳಿಗೆ ಸಂಬಂಧಿಸಿದ ಹುದ್ದೆಗಳಾಗಿದ್ದು, ದೈಹಿಕ ಶ್ರಮದ ಅಗತ್ಯವಿರುತ್ತದೆ. ಆದ್ದರಿಂದ ನೇಮಕಾತಿ ಪ್ರಕ್ರಿಯೆಯಲ್ಲಿ ಕುಷ್ಠರೋಗದಿಂದ ಗುಣಮುಖರಾದವರು (Leprosy Cured), ಶ್ರವಣದೋಷ (Hearing Impaired) ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು.

** ಕರ್ನಾಟಕ ಸರ್ಕಾರದ ಆದೇಶ ಸಂ:ಸಿಆಸುಇ 179 2020 ಸೇನೆನಿ ದಿನಾಂಕ:06-07-2021ರ ಆದೇಶ ಸಂಖ್ಯೆ ತೃತೀಯ ಲಿಂಗದವರಿಗೆ ಶೇ.1 ಮೀಸಲಾತಿ ನೀಡಿರುವುದರಿಂದ ಮೇಲೆ ತಿಳಿಸಿದ ಕೋಷ್ಟಕದಲ್ಲಿ ಸಾಮಾನ್ಯ ಅರ್ಹತೆ ಕಾಲಂ ನಲ್ಲಿ 1 ಹುದ್ದೆ ಮೀಸಲಿರಿಸಿದೆ.

## 2. ಅರ್ಜಿ ಶುಲ್ಕ:

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಅಂಗವಿಕಲರು | ರೂ. 100/- |
| ಇತರರು | ರೂ. 200/- |

ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಮೊದಲು ವೆಬ್‌ಸೈಟ್ ನಲ್ಲಿ ಲಭ್ಯವಿರುವ PDF ಚಲನ್ ನ್ನು download ಮಾಡಿಕೊಂಡು ಕೆನರಾ ಬ್ಯಾಂಕ್ ನ ಯಾವುದೇ ಶಾಖೆಯಲ್ಲಿ ನಿಗದಿತ ಶುಲ್ಕವನ್ನು ಪಾವತಿ ಮಾಡತಕ್ಕದ್ದು. (ನೀವು ಉಪಯೋಗಿಸುವ ಕಂಪ್ಯೂಟರ್ ಪಿ.ಡಿ.ಎಫ್ ರೀಡರ್ ಅಡೋಬ್ ಅಕ್ರೋಬ್ಯಾಟ್ಸಪೋರ್ಟ್ ಹೊಂದಿರತಕ್ಕದ್ದು.) ಶುಲ್ಕ

ಪಾವತಿಸಿದ ನಂತರ ಚಲನ್ ನ ಪ್ರತಿಯನ್ನು ಆನ್‌ಲೈನ್ ನಲ್ಲಿ ಅರ್ಜಿಸಲ್ಲಿಸುವ ವೇಳೆ ಇತರ ದಾಖಲೆಗಳೊಂದಿಗೆ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 07-10-2021 ರಿಂದ 23-11-2021**

**ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಮಂಗಳೂರು ಮಹಾನಗರ ಪಾಲಿಕೆಯಲ್ಲಿ ತೆರೆದಿರುವ ಸಹಾಯ ಕೇಂದ್ರ ಅಥವಾ ಜಿಲ್ಲೆಯ ನಾಗರೀಕ ಸೇವಾ ಕೇಂದ್ರಗಳಲ್ಲಿಯು ಸೇವೆಗಳನ್ನು ಉಪಯೋಗಿಸಬಹುದು.**

## 3. ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:

1. ಸರ್ಕಾರದ ಆದೇಶ ಸಂಖ್ಯೆ: ನಅಇ 129 ಎಂಎನ್ ಇ 2017 ಬೆಂಗಳೂರು ದಿನಾಂಕ:05-12-2017ರಲ್ಲಿ ಉಲ್ಲೇಖಿಸಿದ ಪೌರಕಾರ್ಮಿಕರು ಎಂದರೆ ಮಹಾನಗರಪಾಲಿಕೆಗಳಲ್ಲಿ ಕ್ಷೇಮಾಭಿವೃದ್ಧಿ/ದಿನಗೂಲಿ/ಗುತ್ತಿಗೆ/ಹೊರಗುತ್ತಿಗೆ/ಇತರೆ ಆಧಾರದ ಮೇಲೆ ನೇಮಕಾತಿ ಹೊಂದಿ ಕನಿಷ್ಠ 2 ವರ್ಷ ಸೇವೆಯನ್ನು ಸಲ್ಲಿಸಿರಬೇಕು. ಮತ್ತು ಈ ನಿಯಮಗಳು ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರುವವರು. (ಲೋಡರ್ಸ್/ಕ್ಲೀನರ್ಸ್/ಒಳಚರಂಡಿ ಸಹಾಯಕರು/ಇತರೆ ಪರಿಗಣಿಸಲಾಗುವುದಿಲ್ಲ.)
2. ವಯೋಮಿತಿ : ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

| ವರ್ಗ | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ/ಪ.ಪಂ/ ಪ್ರ-1, 2ಎ, 2ಬಿ, 3ಎ, 3ಬಿ, ಸಾಮಾನ್ಯ ವರ್ಗ, ಇತರೆ | 18 ವರ್ಷ | 45 ವರ್ಷ |

3. ಅರ್ಜಿಯನ್ನು ಆನ್‌ಲೈನ್ ಮೂಲಕವೇ ಸಲ್ಲಿಸುವುದು. ಮತ್ತು ಅರ್ಜಿ ಸಲ್ಲಿಸುವ ವೇಳೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಮತ್ತು ಶುಲ್ಕ ಪಾವತಿಸಿದ ಚಲನ್ ಗಳನ್ನು ಕಡ್ಡಾಯವಾಗಿ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.
4. ಕೊನೆಯ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಮತ್ತು ಅಪೂರ್ಣವಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
5. ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
6. 'ಇತರೆ' ವರ್ಗೀಕರಣದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಸಲ್ಲಿಸತಕ್ಕದ್ದು (ಕಲಂ 6 The Transgender Persons (Protection of Rights) Act,2019).
7. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
8. ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂದರ್ಭದಲ್ಲಿ ಕಛೇರಿ ಸಿಬ್ಬಂದಿ ಅಥವಾ ಸಿಬ್ಬಂದಿಯೇತರ ಮೂಲಗಳ ಮೂಲಕ ಯಾವುದೇ ರೀತಿಯ ಬಾಹ್ಯ ಬೆಂಬಲವನ್ನು ಪಡೆಯುವ ಪ್ರಯತ್ನ ಮಾಡಿದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು/ ಅಭ್ಯರ್ಥಿಕೆಯನ್ನು ಅನರ್ಹಗೊಳಿಸಲಾಗುವುದು.

## 4. ಅಂಗವಿಕಲ ಅಭ್ಯರ್ಥಿಗಳು :

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9(1-ಎ)ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್-'ಡಿ' ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ.5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ:ಕಂಇ 100 ಬಿ.ಎಸ್.ಸಿ 2011 ದಿನಾಂಕ:29.6.2012ರಂತೆ ಮೀಸಲಾತಿಯಂತೆ ನೀಡಲಾಗುವುದು. 24ನೇ ಬಿಂದು ಚಲನವಲನ ವೈಕಲ್ಯ ಇರುವವರಿಗೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೆನೆನಿ 2005, ದಿನಾಂಕ.19/11/2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ

ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು, ಅದರ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

## 5. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರಗಳನ್ನು ಚಾಲ್ತಿಯಲ್ಲಿರುವ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಶೀಲ್ದಾರ್ ರಿಂದ) ಪಡೆದು ಸಲ್ಲಿಸುವುದು. ಮತ್ತು ಮೂಲ ದಾಖಲೆಗಳನ್ನು ಪರಿಶೀಲಿಸುವ ದಿನಾಂಕದಂದು ಹಾಜರುಪಡಿಸತಕ್ಕದ್ದು.

## 6. ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:

ಸರ್ಕಾರದ ಯೋಜನೆಗಳಿಂದ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರು ನೀಡಿದ ಪ್ರಮಾಣ ಪತ್ರವನ್ನು ಪಡೆದಿರಬೇಕು.

## 7. ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

## 8. ಗ್ರಾಮೀಣ ಅಭ್ಯರ್ಥಿ :

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಾಗಿದ್ದಲ್ಲಿ, 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಮಾಡಿರುವ ಬಗ್ಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ದೃಢೀಕೃತ ಪತ್ರವನ್ನು ಸಲ್ಲಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಅಭ್ಯರ್ಥಿಗಳು ಗ್ರಾಮಾಂತರ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು, ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ, ಮೇಲ್‌ಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದು, ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ,ಪರಿಶಿಷ್ಟ ಪಂಗಡ, ಪ್ರವರ್ಗ-1 ಪ್ರವರ್ಗ-2ಎ,2ಬಿ,3ಎ,3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿ ಸಲ್ಲಿಸಬೇಕಾಗಿರುತ್ತದೆ.

## 9. ಕನ್ನಡ ಮಾಧ್ಯಮ ಅಭ್ಯರ್ಥಿಗಳು :

ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್ 71 ಎಸ್ ಆರ್ ಆರ್ 2001 ದಿ: 24.10.2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ (9)(1)(ಸಿ)ರನ್ವಯ ಅಭ್ಯರ್ಥಿಯು 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.

## 10. ಅರ್ಹತಾ ಷರತ್ತುಗಳು :

1. ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.
2. ಪೌರಕಾರ್ಮಿಕ ಅಂದರೆ ಮಹಾನಗರಪಾಲಿಕೆಯಲ್ಲಿ ಕನಿಷ್ಠ 2 ವರ್ಷಗಳ ಕಾಲ ಕ್ಷೇಮಾಭಿವೃದ್ಧಿ/ದಿನಗೂಲಿ/ ಗುತ್ತಿಗೆ /ಹೊರಗುತ್ತಿಗೆ/ಇತರೆ ಆಗಿ ಸೇವೆ ಸಲ್ಲಿಸುತ್ತಿರಬೇಕು. (ಲೋಡರ್ಸ್/ಕ್ಲೀನರ್ಸ್/ಇತರೆ ಪರಿಗಣಿಸಲಾಗುವುದಿಲ್ಲ.)

3. ನೇಮಕಾತಿಯನ್ನು ಮಂಗಳೂರು ಮಹಾನಗರಪಾಲಿಕೆಗೆ ಮಾತ್ರ ಸೀಮಿತಗೊಳಿಸಲಾಗಿದೆ. ಹಾಗೂ ಮಂಗಳೂರು ಮಹಾನಗರಪಾಲಿಕೆಯಲ್ಲಿ ಕ್ಷೇಮಾಭಿವೃದ್ಧಿ/ದಿನಗೂಲಿ/ಗುತ್ತಿಗೆ/ಹೊರಗುತ್ತಿಗೆ/ಇತರೆ ಪೌರಕಾರ್ಮಿಕರಾಗಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಆದ್ಯತೆ ನೀಡಲಾಗುವುದು.
4. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು. ದೈಹಿಕವಾಗಿ ಸಾಮರ್ಥ್ಯವಿರುವ ಬಗ್ಗೆ ಗ್ರೂಪ್ 'ಡಿ' (ಪೌರಕಾರ್ಮಿಕರು) ನೌಕರರಿಗೆ ನಿಗಧಿಪಡಿಸಲಾದ ಕನಿಷ್ಠ ದೇಹ ದಾರ್ಡ್ಯತೆ ಹೊಂದಿರಬೇಕು. ಅರ್ಜಿ ಸಲ್ಲಿಕೆ ಹಾಗೂ ಆಯ್ಕೆ ಸಮಯದಲ್ಲಿ ಸರಕಾರಿ ವೈದ್ಯರ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
5. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ / ರಾಜ್ಯ ಸರ್ಕಾರ ಕಾಯ್ದಿರಿಸಿ ಕೊಂಡಿದೆ. ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

## 11. ಕೆಳಕಂಡ ಮೂಲ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸುವುದು.

- ಜನ್ಮ ದಿನಾಂಕವನ್ನು ನಮೂದಿಸಿರುವ ಆಧಾರ್/ ಜನನ ಪ್ರಮಾಣ ಪತ್ರ/ಪಡಿತರ ಚೀಟಿ/ ಮತದಾರರ ಗುರುತಿನ ಚೀಟಿ/ ಎಸ್.ಎಸ್.ಎಲ್.ಸಿ ಅಥವಾ ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉದ್ಧೃತ ಭಾಗ.
- ಅರ್ಹತೆ-

| | |
|---|---|
| ಕ್ಷೇಮಾಭಿವೃದ್ಧಿ/ದಿನಗೂಲಿ ಪೌರಕಾರ್ಮಿಕ | ಕ್ಷೇಮಾಭಿವೃದ್ಧಿ/ದಿನಗೂಲಿ ಪೌರಕಾರ್ಮಿಕರಾಗಿ ಮಹಾನಗರಪಾಲಿಕೆ ಆಯುಕ್ತರಿಂದ ಸೇವೆ ಸಲ್ಲಿಸುತ್ತಿರುವ ಅವಧಿಗೆ ಅನುಗುಣವಾಗಿ ಪ್ರಮಾಣ ಪತ್ರ, 2 ವರ್ಷ ಮೇಲ್ಪಟ್ಟು ವೇತನ ಪಡೆದ ದಾಖಲೆ. |
| ಸಮಾನ ಕೆಲಸಕ್ಕೆ ಸಮಾನ ವೇತನ ಪೌರಕಾರ್ಮಿಕ | 1) ನೇಮಕಾತಿಯ ಆದೇಶ ಪತ್ರ ಅಥವಾ ನಡವಳಿ<br>2) ಆಯುಕ್ತರು ಮಹಾನಗರಪಾಲಿಕೆಯಿಂದ ಸೇವೆ ಸಲ್ಲಿಸುತ್ತಿರುವ ಅವಧಿಗೆ ಅನುಗುಣವಾಗಿ ಪ್ರಮಾಣ ಪತ್ರ, 2 ವರ್ಷ ಮೇಲ್ಪಟ್ಟು ವೇತನ ಪಡೆದ ದಾಖಲೆ. |
| ಗುತ್ತಿಗೆ ಪೌರಕಾರ್ಮಿಕ | ನೇಮಕಾತಿಯ ಆದೇಶ ಪತ್ರ ಅಥವಾ ನಡವಳಿ ಹಾಗೂ ಆಯುಕ್ತರು ಮಹಾನಗರಪಾಲಿಕೆಯಿಂದ ಸೇವೆ ಸಲ್ಲಿಸುತ್ತಿರುವ ಅವಧಿಗೆ ಅನುಗುಣವಾಗಿ ಪ್ರಮಾಣ ಪತ್ರ, 2 ವರ್ಷ ಮೇಲ್ಪಟ್ಟು ವೇತನ ಪಡೆದ ದಾಖಲೆ. |
| ಹೊರಗುತ್ತಿಗೆ ಪೌರಕಾರ್ಮಿಕ | ಕಾರ್ಮಿಕ ರಾಜ್ಯ ವಿಮೆ.(ಇ.ಎಸ್.ಐ) ಮತ್ತು ಭವಿಷ್ಯ ನಿಧಿ(ಪಿಎಫ್)ಮತ್ತು ವೇತನ ಪಡೆದ 2 ವರ್ಷಗಳ ದೃಢೀಕೃತ ದಾಖಲಾತಿ ಮತ್ತು ಆಯುಕ್ತರು, ಮಹಾನಗರಪಾಲಿಕೆ ಇವರಿಂದ ಪಡೆದ ಪ್ರಮಾಣ ಪತ್ರ. |

- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
- ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ,3ಬಿ ಗಳ ಜಾತಿ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

➢ ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

➢ ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

➢ ವಾಸ್ತವ್ಯ ದೃಢೀಕರಣ ಪತ್ರ.

➢ ಮೇಲ್ಕಂಡಂತೆ ನಿಗದಿಪಡಿಸಿದ ಎಲ್ಲಾ ದಾಖಲೆಗಳನ್ನು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ ಮೂಲ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

## 12. ಇತರೆ ಸೂಚನೆಗಳು:

1. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
2. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ಯಾವುದೇ ಕಾರಣಕ್ಕು ನಂತರದಲ್ಲಿ ಬದಲಾವಣೆ ಆಗುವ ವಿಳಾಸವನ್ನು ಪರಿಗಣಿಸಲಾಗುವುದಿಲ್ಲ.
4. ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್‌ಸೈಟ್ ನಲ್ಲಿ ತಿಳಿಸಿರುವ ಸೂಚನೆಗಳನ್ನು ಪಾಲಿಸುವುದು.
5. ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ, ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದು ಪಡಿಸುವ ಅಥವಾ ವಿಧಿಸಲಾಗಿರುವ ಯಾವುದೇ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ತುಂಬಲಾಗುವ ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ/ನಿರ್ಣಯಿಸುವ ಅಧಿಕಾರವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ದ.ಕ ಜಿಲ್ಲೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.
6. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.
7. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿ ಕಛೇರಿ ಜಿಲ್ಲಾ ನಗರಾಭಿವೃದ್ಧಿ ಕೋಶ, ಮಂಗಳೂರು ವೆಬ್‌ಸೈಟ್ **http://dakshinakannadadudc.mrc.gov.in** ಅಥವಾ ಮಂಗಳೂರು ಮಹಾನಗರಪಾಲಿಕೆ ವೆಬ್‌ಸೈಟ್ **http://mangalurucity.mrc.gov.in** ನ್ನು ಸಂಪರ್ಕಿಸುವುದು.
8. ಆಯುಕ್ತರು, ಮಂಗಳೂರು ಮಹಾನಗರಪಾಲಿಕೆ ನೇಮಕಾತಿಗೆ ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಸಹಾಯ ಕೇಂದ್ರವನ್ನು ಪಾಲಿಕೆಯ ಕಟ್ಟಡದಲ್ಲಿ ತೆರೆಯಲು ಸೂಚಿಸಿದೆ. **ಸಹಾಯವಾಣಿ ಸಂಖ್ಯೆ: 0824-2220313 ಹಾಗೂ 0824-2984593**

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ

ಪ್ರತಿಯನ್ನು :

1. ಮಾನ್ಯ ಸರಕಾರದ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2. ಸರಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.

3. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
4. ಸಂಕಲನಾಧಿಕಾರಿ, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜು, ಅಂಚೆ 8ನೇ ಮೈನ್ ಮೈಸೂರು ರಸ್ತೆ ಕೆಂಗೇರಿ ಬೆಂಗಳೂರು – 560059. ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಕಳುಹಿಸುತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು, ದ.ಕ ಜಿಲ್ಲೆ ಇವರಿಗೆ ಒದಗಿಸಲು ಕೋರಿದೆ.
5. ಮಹಾಲೇಖಪಾಲರು(ಎ ಮತ್ತು ಇ) ಕರ್ನಾಟಕ, ಬೆಂಗಳೂರು ಇವರಿಗೆ ಸಲ್ಲಿಸಿದೆ.
6. ಪ್ರಾದೇಶಿಕ ಆಯುಕ್ತರು ಮೈಸೂರು ವಿಭಾಗ, ಮೈಸೂರು ರವರ ಅವಗಾಹನೆಗೆ ಸಲ್ಲಿಸಿದೆ.
7. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ, ತಮ್ಮ ಕಾರ್ಯಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
8. ಆಯುಕ್ತರು, ಮಂಗಳೂರು ಮಹಾನಗರಪಾಲಿಕೆ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
9. ರಾಜ್ಯದ ಎಲ್ಲಾ ಆಯುಕ್ತರು, ಮಹಾನಗರಪಾಲಿಕೆಗಳಿಗೆ ಕಳುಹಿಸುತ್ತಾ, ತಮ್ಮ ಕಾರ್ಯಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
10. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ದ.ಕ ಜಿಲ್ಲೆ, ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ
11. ಜಿಲ್ಲಾ ಅಧಿಕಾರಿ ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ದ.ಕ ಜಿಲ್ಲೆ, ಮಂಗಳೂರು
12. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ದ.ಕ ಜಿಲ್ಲೆ, ಮಂಗಳೂರು
13. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ.